# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 632(864)
ಉತ್ತರಿಸಬೇಕಾದ ದಿನಾಂಕ 11.03.2020
ಸದಸ್ಯರ ಹೆಸರು ಶ್ರೀ ರಘುನಾಥ ರಾವ್ ಮಲ್ಕಾಪೂರೆ,
ಉತ್ತರಿಸುವ ಸಚಿವರು ಕಂದಾಯ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶೀಲ್ದಾರರ/ ನಾಡಕಛೇರಿಗಳಲ್ಲಿ ಸಾರ್ವಜನಿಕರಿಗೂ ಮತ್ತು ರೈತರಿಗೂ ತಮ್ಮ ಜಮೀನಿನ ಪಹಣಿ ಮತ್ತು ಇತರೆ ಪತ್ರಿಕೆ ಪಡೆದುಕೊಳ್ಳಲು ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸ್ಪಷ್ಟ ಮಾಹಿತಿ ನೀಡುವುದು) | ಇಂಥಹ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ |
| ಆ | ಬಂದಿದ್ದರೆ, ಸರ್ಕಾರವು ಕೂಡಲೇ ಇದರ ನಿವಾರಣೆಗೆ ಯಾವ ಕ್ರಮ ಕೈಗೊಂಡಿದೆ; (ಮಾಹಿತಿ ಒದಗಿಸುವುದು) | ಅನ್ವಯಿಸುವುದಿಲ್ಲ |
| ಇ | ಅರ್ಜಿ ಸಲ್ಲಿಸಿದ ಕೂಡಲೇ ತ್ವರಿತವಾಗಿ ಜಮೀನಿನ ದಾಖಲಾತಿಗಳನ್ನು ನೀಡಲು ತಹಶೀಲ್ದಾರರ ಕಛೇರಿಯಲ್ಲಿ ರೈತರಿಗೂ/ಸಾರ್ವಜನಿಕರಿಗೂ ತುಂಬಾ ತೊಂದರೆ ಅನುಭವಿಸುತ್ತಿರುವುದರಿಂದ ಕೂಡಲೇ ಬೇಜವಾಬ್ದಾರಿ ಅಧಿಕಾರಿ/ಸಿಬ್ಬಂದಿಗಳ ವರ್ತನೆ ವಿರುದ್ಧ ಯಾವ ಕ್ರಮ ಜರುಗಿಸಲಾಗುವುದು; (ಮಾಹಿತಿ ನೀಡುವುದು) | ಇಂಥಹ ಪ್ರಕರಣಗಳು ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿ/ ಸಿಬ್ಬಂದಿಗಳ ವಿರುದ್ಧ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳನ್ವಯ ಕ್ರಮ ಜರುಗಿಸಲಾಗುವುದು. |
| ಈ | ಬೀದರ್ ಜಿಲ್ಲೆಯಲ್ಲಿ ಜಾತಿ ಪ್ರಮಾಣ ಪತ್ರ ಹಾಗೂ ಆದಾಯ ಇತರೆ ಪ್ರಮಾಣ ಪತ್ರ ಪಡೆದುಕೊಳ್ಳಲು ಆಗುತ್ತಿರುವ ತೊಂದರೆಗಳೇನು; ಮತ್ತು ತೊಂದರೆ ಆಗದಂತೆ ಸರ್ಕಾರವು ಯಾವ ಯಾವ ಕ್ರಮ ಕೈಗೊಳ್ಳುವುದು? (ಸಂಪೂರ್ಣ ಮಾಹಿತಿ ನೀಡುವುದು) | ಪ್ರಮಾಣ ಪತ್ರಗಳ ವಿತರಣೆಯನ್ನು ಸಕಾಲ ಯೋಜನೆಯಡಿ ನಿಗಧಿತ ಅವಧಿಯಲ್ಲಿ ಕೈಗೊಳ್ಳಲಾಗುತ್ತಿದೆ. |

ಕಂಇ 36 ಎಂಆರ್ಆರ್ 2020

(ಆರ್. ಅಶೋಕ್)
ಕಂದಾಯ ಸಚಿವರು